ಅ) ಹಾಗಿದ್ದರೆ ಬೆಳಗಾವಿ ನಗರಪಾಲಿಕೆಯ ಕಟ್ಟಡದ ಮೇಲಿರುವ ಭಗವಾ ಝಂಡಾ ತೆಗೆಸುವುದರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಇ) ಸರ್ಕಾರವು ಬೆಳಗಾವಿ ನಗರಪಾಲಿಕೆಯ ಕಟ್ಟಡದ ಮೇಲೆ ರಾಷ್ಟ್ರಧ್ವಜ ಹಾರಿಸುವಂತೆ ನಿರ್ದೇಶನ ನೀಡುವುದೇ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ರಾಜ್ಯದ ಎಲ್ಲಾ ನಗರಪಾಲಿಕೆಗಳ ಕಟ್ಟಡಗಳ ಮೇಲೆ ರಾಷ್ಟ್ರಧ್ವಜ ಹಾಗೂ ಸರಕಾರದಿಂದ ಅಂಗೀಕೃತವಾದ ಧ್ವಜವನ್ನು ಹೊರತುಪಡಿಸಿ, ಉಳಿದ ಯಾವುದೇ ಧ್ವಜವನ್ನು ಹಾರಿಸುವದನ್ನು ನಿಷೇಧಿಸುವ ಕಲಂಗಳನ್ನು 1976ರ ಕರ್ನಾಟಕ ಮಹಾನಗರಪಾಲಿಕೆಗಳ ಕಾಯಿದೆ ಹಾಗೂ 1964ರ ಕರ್ನಾಟಕ ಮುನಿಸಿಪಾಲಿಟಿಗಳ ಕಾಯಿದೆಗೆ ಸೇರಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಇ) ಕ್ರಮ ಸಂಖ್ಯೆ 2 ಕ್ಕೆ ನೀಡಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ನಿಪ್ಪಾಣಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ

1272 - ಶ್ರೀ ಸುಭಾಷ್ ಜೋಷಿ (ನಿಪ್ಪಾಣಿ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಿಪ್ಪಾಣಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಾದರೆ, ಈ ಸಮಸ್ಯೆಯನ್ನು ನೀಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ಸರ್ಕಾರವು ರೂ. 110.00 ಲಕ್ಷಗಳ ಅಂದಾಜು ವೆಚ್ಚದ ನಿಪ್ಪಾಣಿ ಪಟ್ಟಣದ ಹೆಚ್ಚುವರಿ ನೀರು ಸರಬರಾಜು ಯೋಜನೆಗೆ 30-3-1990 ರಲ್ಲಿ ಮಂಜೂರಾತಿ ನೀಡಿದೆ. ಈ ಯೋಜನೆಯನ್ನು ಕಾರ್ಯಗತಗೊಳಿಸಲು ಕೈಗೆತ್ತಿಕೊಳ್ಳಲಾಗಿದೆ. ಈ ಯೋಜನೆಯು ಪೂರ್ತಿಗೊಂಡ ಮೇಲೆ ನಿಪ್ಪಾಣಿ ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಬಹುದಾಗಿದೆ.

ರಾಜ್ಯದಲ್ಲಿ ಜಿಲ್ಲಾ ಕಾರ್ಮಿಕ ನ್ಯಾಯಾಲಯಗಳ ಪ್ರಾರಂಭ

1273 - ಶ್ರೀ ಸುಭಾಷ್ ಜೋಷಿ (ನಿಪ್ಪಾಣಿ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಇಡೀ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಮಿಕ ನ್ಯಾಯಾಲಯಗಳನ್ನು ಸ್ಥಾಪನೆ ಮಾಡುವ ಯೋಜನೆ ಇದೆಯೇ?

ಆ) ಹಾಗಿದ್ದಲ್ಲಿ, ಬೆಳಗಾಂ ಜಿಲ್ಲೆಯಲ್ಲಿ ಯಾವಾಗ ಕಾರ್ಮಿಕ ನ್ಯಾಯಾಲಯ ಸ್ಥಾಪನೆ ಆಗುವುದು?

ಶ್ರೀ ಸಿ. ಎಸ್. ನಾಡಗೌಡ (ಅಪ್ಪಾಜಿ) (ಕಾರ್ಮಿಕ ಸಚಿವರು) :

ಅ) ಪ್ರತಿ ಜಿಲ್ಲೆಯಲ್ಲಾ ಕಾರ್ಮಿಕ ನ್ಯಾಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಆ) ಬೆಳಗಾಂನಲ್ಲಿ ಕಾರ್ಮಿಕ ನ್ಯಾಯಾಲಯವನ್ನು ಕೆಲಸದ ಒತ್ತಡ ಹಾಗೂ ಹಣದ ಲಭ್ಯತೆಯ ಮೇಲೆ ನಿರ್ಧರಿಸಲಾಗುವುದು.